24th April 2017, Sunday

2014 KAS Selection list Annonced “Nandini from RVCE selected as KAS Officer”.

# 2014ನೇ ಸಾಲಿನ ಕೆಎಎಸ್ ಆಯ್ಕೆ ಪಟ್ಟಿ ಪ್ರಕಟ

**ವಿಕ ಸುದ್ದಿಲೋಕ** ಬೆಂಗಳೂರು

2014ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್ 464 ಹುದ್ದೆಗಳ ಆಯ್ಕೆ ಪಟ್ಟಿಯನ್ನು ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್ಸಿ) ಶನಿವಾರ ಪ್ರಕಟಿಸಿದೆ.

ಪತ್ರಾಂಕಿತ ‘ಎ‘ ದರ್ಜೆಯ 56 ಅಸಿಸ್ಟೆಂಟ್ ಕಮಿಷನರ್ (ಎಸಿ), 32 ಡಿವೈಎಸ್ಪಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆಯ 22 ಕಾರ್ಯನಿರ್ವಾಹಕ ಅಧಿಕಾರಿ, 5 ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಹಾಗೂ ವಾಣಿಜ್ಯ ತೆರಿಗೆ ಇಲಾಖೆಯ 44 ಸಹಾಯಕ ಆಯುಕ್ತ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದೆ.

‘ಬಿ’ ದರ್ಜೆಯ ಒಟ್ಟು 79 ತಹಶೀಲ್ದಾರ್ (ಗ್ರೇಡ್ -2), 45 ವಾಣಿಜ್ಯ ತೆರಿಗೆ ಅಧಿಕಾರಿ ಹುದ್ದೆಗಳು, 42 ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿಗಳು, 25 ಸಹಾಯಕ ಖಜಾನೆ ಅಧಿಕಾರಿಗಳು ಹಾಗೂ 7 ಬಂಧಿಖಾನೆ ಅಸಿಸ್ಟೆಂಟ್ ಸೂಪರಿಂಟೆಂಡೆಂಟ್ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದೆ. ಒಟ್ಟು 464 ಹುದ್ದೆಗಳ ಪೈಕಿ 90 ಹುದ್ದೆಗಳನ್ನು ಹೈದರಾಬಾದ್ ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ ಮೀಸಲಿಡಲಾಗಿದೆ. ಆಯೋಗದ ವೆಬ್‌ಸೈಟ್ http://kpsc.kar.nic.in/lists ನಲ್ಲಿ ಆಯ್ಕೆ ಪಟ್ಟಿ ಪ್ರಕಟಿಸಲಾಗಿದ್ದು, ಆಕ್ಷೇಪಣೆ ಸಲ್ಲಿಕೆಗೆ 30 ದಿನಗಳ ಕಾಲಾವಕಾಶ ನೀಡಲಾಗಿದೆ.

## ಶಾಸಕರ ಪುತ್ರಿ ಆಯ್ಕೆ

**ಬಾಗಲಕೋಟ:** ಕೆಪಿಎಸ್‌ಸಿ 2014ರಲ್ಲಿ ನಡೆಸಿದ ಕೆಎಎಸ್ ಪರೀಕ್ಷೆಯ ತಾತ್ಕಾಲಿಕ ನೇಮಕ ಪಟ್ಟಿಯಲ್ಲಿ ಜಿಲ್ಲೆಯ ಬೀಳಗಿ ಶಾಸಕ ಜೆ.ಟಿ. ಪಾಟೀಲರ ಪುತ್ರಿ ನಂದಿನಿ ಪಾಟೀಲ ಸ್ಥಾನ ಪಡೆದಿದ್ದಾರೆ. ನಂದಿನಿ ವಾಣಿಜ್ಯ ತೆರಿಗೆ ಇಲಾಖೆಯ ಉಪವಿಭಾಗಾಧಿಕಾರಿಯಾಗಿ ನೇಮಕಗೊಂಡಿದ್ದಾರೆ. ಬೆಂಗಳೂರಿನ ಆರ್.ವಿ. ಎಂಜಿನಿಯರಿಂಗ್ ಕಾಲೇಜಿನಲ್ಲಿ ಬಿಇ ಪೂರೈಸಿದ ನಂದಿನಿ, ಅಮೆರಿಕದ ನ್ಯೂಯಾರ್ಕ್‌ನಲ್ಲಿ ಎಂಎಸ್ ಪದವಿ ಪಡೆದರು. ಆದರೆ ಸಮಾಜ ಸೇವೆ ಮಾಡಬೇಕೆಂಬ ತುಡಿತದಿಂದ ಕೆಎಎಸ್ ಪರೀಕ್ಷೆ ಬರೆದು ಯಶಸ್ವಿಯಾಗಿದ್ದಾರೆ. ನಂದಿನಿ ಅವರ ಪತಿ ಐಎಎಸ್ ಅಧಿಕಾರಿ ರವಿ ಪಟ್ಟಣಶೆಟ್ಟಿ ವಿಶಾಖಾಪಟ್ಟಣಂನಲ್ಲಿ ಅಪರ ಜಿಲ್ಲಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.